## 27. ಹೆಜ್ಜೆ ಹಿಂದಿಟ್ಟ ಸರ್ಕಾರ

ಕೋವಿಡ್ 19 ಪ್ರಕರಣಗಳು ಪತ್ತೆಯಾದ ಪ್ರದೇಶಗಳನ್ನು ಹೊರತುಪಡಿಸಿ ಉಳಿದ ಕಡೆಗಳಲ್ಲಿ ಲಾಕ್‌ಡೌನ್ ನಿರ್ಬಂಧ ಸಡಿಲಿಸುವುದಾಗಿ ಪ್ರಕಟಿಸಿದ್ದ ರಾಜ್ಯ ಸರ್ಕಾರ ಕೆಲವೇ ಗಂಟೆಗಳಲ್ಲಿ ಇಟ್ಟ ಹೆಜ್ಜೆಯಿಂದ ಹಿಂದೆ ಸರಿದಿದೆ. ಏಪ್ರಿಲ್ 20 ರಿಂದ ದ್ವಿಚಕ್ರವಾಹನ ಓಡಾಟಕ್ಕೆ ಹಾಗೂ ಐಟಿ–ಬಿಟಿ ಕಂಪನಿಗಳ ಸಿಬ್ಬಂದಿ ಶೇ:33ರಷ್ಟು ಮಂದಿ ಕಛೇರಿಗೆ ತೆರಳಲು ಅವಕಾಶ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿಯವರು ಪ್ರಕಟಿಸಿದ್ದರು. ಲಾಕ್‌ಡೌನ್ ಸಡಿಲಗೊಳಿಸುವ ತೀರ್ಮಾನದ ಬಗ್ಗೆ ಸಾರ್ವಜನಿಕ ವಲಯದಲ್ಲಿ ವಿರೋಧ ವ್ಯಕ್ತವಾದ ಬಳಿಕ ಈ ಎರಡು ನಿರ್ಧಾರಗಳನ್ನು ಕೈ ಬಿಡಲಾಯಿತು.

ನಿಯಂತ್ರಣ ವಲಯಗಳ ಮೇಲ್ವಿಚಾರಣೆಗೆ ಇನ್ಸಿಡೆಂಟ್ ಕಮಾಂಡರ್ ನೇಮಿಸಿ, ಮ್ಯಾಜಿಸ್ಟೀರಿಯಲ್ ಅಧಿಕಾರ ನೀಡಲಾಗುವುದು. ನಿಯಂತ್ರಣ ವಲಯದಲ್ಲಿ ಯಾರೂ ಮನೆಯಿಂದ ಹೊರಬರುವಂತಿಲ್ಲ ಅಗತ್ಯ ವಸ್ತುಗಳನ್ನು ಮನೆ ಬಾಗಿಲಿಗೆ ತಲುಪಿಸಲಾಗುವುದು. ಬಫರ್ ವಲಯಗಳಲ್ಲಿ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಲಾಗುವುದು.

ನಗರಗಳಲ್ಲಿ ಕಾರ್ಮಿಕರ ವಾಸ್ತವ್ಯಕ್ಕೆ ವ್ಯವಸ್ಥೆ ಇರುವ ಕಡೆಗಳಲ್ಲಿ ಕಟ್ಟಡ ನಿರ್ಮಾಣ ಚಟುವಟಿಕೆ ಆರಂಭಿಸಲು ಅನುಮತಿ ನೀಡಲಾಗುವುದು. ಗ್ರಾಮೀಣ ಪ್ರದೇಶಗಳಲ್ಲಿ ಉತ್ಪಾದನಾ ವಲಯದ ಕೈಗಾರಿಕೆಗಳು ಹಾಗೂ ನಗರಗಳಲ್ಲಿ ವಿಶೇಷ ಆರ್ಥಿಕ ವಲಯಗಳ (ಎಸ್‌ಇಝಡ್), ಕೈಗಾರಿಕಾ ವಸಾಹತುಗಳ ಮತ್ತು ಕೈಗಾರಿಕಾ ಟೌನ್‌ಷಿಪ್‌ಗಳ ಕಾರ್ಯನಿರ್ವಹಣೆಗೂ ಅವಕಾಶ ನೀಡಲಾಗುವುದು.

ಅಂತರ ಜಿಲ್ಲೆ ಪ್ರಯಾಣಕ್ಕೆ ಅವಕಾಶವಿಲ್ಲ ಬೆಂಗಳೂರು ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಕೈಗಾರಿಕೆಗಳ ಉದ್ಯೋಗಿಗಳ ಓಡಾಟದ ದೃಷ್ಟಿಯಿಂದ ಒಂದು ಜಿಲ್ಲೆಯಾಗಿ ಪರಿಗಣಿಸಲಾಗುವುದು. ಹಿರಿಯ ನಾಗರಿಕರು ಮನೆಯಿಂದ ಹೊರಬರಬಾರದು, ಮಾಸ್ಕ್ ಧರಿಸುವುದು ಕಡ್ಡಾಯ. ಎಲ್ಲ ಕಡೆಗಳಲ್ಲಿ ಅಂತರ ಪಾಲನೆ ಕಡ್ಡಾಯ. ಉಗುಳುವುದನ್ನು ನಿಷೇಧಿಸಲಾಗಿದೆ. ಲಾಕ್‌ಡೌನ್ ಘೋಷಿಸಿರುವ (ಮೇ3) ಅವಧಿವರೆಗೂ ನಿಷೇಧಾಜ್ಞೆ (ಸೆಕ್ಷನ್144) ಮುಂದುವರಿಯಲಿದೆ.

ಆಧಾರ:ಪ್ರಜಾವಾಣಿ, ದಿನಾಂಕ:19.04.2020.